ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರವರಿ, 2021

ಪ್ರಸಕ್ತ ಸಾಲಿನಲ್ಲಿ ಬೃಹತ್ ಕೈಗಾರಿಕೆಗಳ ಬಂಡವಾಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) -

34 (265) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಪ್ರಸ್ತುತ ವರ್ಷದಲ್ಲಿ ರಾಜ್ಯದ ಬೃಹತ್ ಕೈಗಾರಿಕಾ ಬಂಡವಾಳ ಹೂಡಿಕೆ ಆಕರ್ಷಣೆ ತೀವ್ರ ಕುಸಿತ ಕಂಡಿರುವ ಹಿನ್ನೆಲೆಗೆ ಸೂಕ್ತ ಕಾರಣಗಳಾವುವು ;

(ಆ) ಕೋವಿಡ್ ಹೊರತುಪಡಿಸಿ ಬಂಡವಾಳ ಹೂಡಿಕೆ ಆಕರ್ಷಣೆ ಕುಸಿತ ಕಾಣಲು ಬೇರೆ ಕಾರಣಗಳೇನು ;

(ಇ) ಕಳೆದ ಬಂಡವಾಳ ಹೂಡಿಕೆ ಸಮ್ಮೇಳನದ ಫಲಿತಾಂಶವನ್ನು ಈ ಸರ್ಕಾರ ಸದುಪಯೋಗ ಪಡಿಸಿಕೊಳ್ಳದೇ ಇರಲು ಕಾರಣಗಳೇನು ;

(ಈ) ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ತೀವ್ರ ಹಿನ್ನಡೆ ಕಾಣುತ್ತಿರುವ ಹಿನ್ನೆಲೆಯಲ್ಲಿ ಇದರ ಉತ್ತೇಜನಕ್ಕೆ ಸರ್ಕಾರದ ಕಾರ್ಯಕ್ರಮಗಳೇನು ?

(ಮಾಹಿತಿ ನೀಡುವುದು)